# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.02 | Issue. 246 | Pages. 2 | Date: 11-09-2026, FRIDAY    RNI NO: KARKAN/2024/89601    Kannada Daily

ಸಂಪುಟ : 02 - ಸಂಚಿಕೆ : 246 - ಪುಟಗಳು : 2    11-09-2026    ಶುಕ್ರವಾರ    Ph: 8762954248    ದರ : ₹1


# ಇನ್ಮುಂದೆ ಎರಡು ದಿನಕ್ಕೊಮ್ಮೆ ಹೇಮಾವತಿ ನೀರು

## ಜಲಾಶಯ ಖಾಲಿ ಹಿನ್ನೆಲೆ | ಬೇಸಿಗೆಗೂ ಮೊದಲೇ ನೀರಿಗೆ ಹಾಹಾಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತೀವ್ರ ಬರದ ಹಿನ್ನೆಲೆಯಲ್ಲಿ ಹೇಮಾವತಿ ಜಲಾಶಯದಲ್ಲಿ ಅಗತ್ಯದಷ್ಟು ನೀರು ಸಂಗ್ರಹವಾಗದೇ ಇರುವುದರಿಂದ ನಗರದಲ್ಲಿ ಬೇಸಿಗೆಗೂ ಮೊದಲೇ ನೀರಿಗೆ ಹಾಹಾಕಾರ ಎದುರಾಗಿದ್ದು, ಎರಡು ದಿನಕ್ಕೊಮ್ಮೆ ಹೇಮಾವತಿ ನೀರು ಪೂರೈಸಲು ಚಿಂತನೆ ನಡೆದಿದೆ.

ಈ ಕುರಿತು ಶಾಸಕ ಹೆಚ್.ಪಿ.ಸ್ವರೂಪ್ ಅವರು ಸುಳಿವು ನೀಡಿದ್ದಾರೆ. ಗುರುವಾರ ಮಹಾರಾಜಾ ಪಾರ್ಕ್‌ಗೆ ಭೇಟಿ ನೀಡಿದ್ದ ಅವರು ಸಾರ್ವಜನಿಕರ ಅಹವಾಲು ಸ್ವೀಕರಿಸಿ ಮಾಹಿತಿ ನೀಡಿದರು.

ಮಳೆ ಅಭಾವದಿಂದಾಗಿ ಗೊರೂರಿನ ಹೇಮಾವತಿ ಜಲಾಶಯದಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿದ್ದು ನಗರಕ್ಕೆ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯವಾಗುವ ಸಾಧ್ಯತೆಯಿದೆ. ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಹಿನ್ನಲೆಯಲ್ಲಿ ಮುಂದಿನ ದಿನಗಳಲ್ಲಿ ನೀರಿಗೆ ಅಭಾವವಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವುದು ಅನಿವಾರ್ಯ. ಈಗಾಗಲೇ ಕೆಲವು ವಾರ್ಡ್‌ಗಳಲ್ಲಿ ನೀರಿನ ಸಮಸ್ಯೆ ಕಂಡುಬರುತ್ತಿದೆ. ಮಹಾನಗರ ಪಾಲಿಕೆ ಆಯುಕ್ತರು, ಇಂಜಿನಿಯರ್ ಹಾಗು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಗಿದೆ. ಅಂತರ್ಜಲ ಮಟ್ಟ ಕುಸಿತದಿಂದ ಬೋರ್‌ವೆಲ್‌ಗಳು ನಿಷ್ಕ್ರಿಯವಾಗಿವೆ. ಹೀಗಾಗಿ ಹೇಮಾವತಿ ನದಿ ನೀರನ್ನು ಎಲ್ಲಾ ವಾರ್ಡ್‌ಗಳಿಗೆ ಪೂರೈಸಲು ಕ್ರಮ ಕೈಗೊಳ್ಳಬೇಕಿದೆ. ನಗರದ ಪ್ರತಿ ಪ್ರದೇಶಕ್ಕೂ ಪ್ರತಿದಿನ ಹೇಮಾವತಿ ನೀರು ಪೂರೈಸುವುದು ಸದ್ಯದ ಪರಿಸ್ಥಿತಿಯಲ್ಲಿ ಸಾಧ್ಯವಾಗದಿದ್ದರೂ, ಒಂದು ದಿನ ಬಿಟ್ಟು ಒಂದು ಪೂರೈಸುವ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಉಳಿದ ದಿನಗಳಲ್ಲಿ ಲಭ್ಯವಿರುವ ಕೊಳವೆ ಬಾವಿ ನೀರನ್ನು ಪೂರೈಸುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.



ನಗರ ವ್ಯಾಪ್ತಿಗೆ ಹೊಸದಾಗಿ ಸೇರ್ಪಡೆಯಾಗಿರುವ ಗ್ರಾಮಗಳಲ್ಲೂ ಕುಡಿಯುವ ನೀರು ಮತ್ತು ಸ್ವಚ್ಛತಾ ವ್ಯವಸ್ಥೆಗೆ ಆದ್ಯತೆ ನೀಡಲಾಗುತ್ತಿದೆ. ನಗರಪಾಲಿಕೆ ವ್ಯಾಪ್ತಿ ವಿಸ್ತರಣೆಯಾದ ಹಿನ್ನಲೆಯಲ್ಲಿ ಮೂಲಸೌಕರ್ಯಗಳ ಮೇಲಿನ ಒತ್ತಡವೂ ಹೆಚ್ಚಾಗಿದೆ. ಆದ್ದರಿಂದ ಸಾರ್ವಜನಿಕರು ನಗರಾಡಳಿತದೊಂದಿಗೆ ಸಹಕರಿಸಬೇಕೆಂದು ಮನವಿ ಮಾಡಿದರು.

### ಹೊರ ಗುತ್ತಿಗೆ ಪೌರ ಕಾರ್ಮಿಕರ ನೇಮಕ

ಹೊಸ ಗ್ರಾಮಗಳು ಸೇರ್ಪಡೆಯಾದ ಬಳಿಕ ಸ್ವಚ್ಛತಾ ಕಾರ್ಯಕ್ಕೆ ಹೆಚ್ಚಿನ ಪೌರಕಾರ್ಮಿಕರ ಅಗತ್ಯವಿದೆ. ಕೆಲವು ಸೇರ್ಪಡೆಗೊಂಡ ಪ್ರದೇಶಗಳಲ್ಲಿ ಸಮರ್ಪಕವಾಗಿ ಸ್ವಚ್ಛತಾ ಕಾರ್ಯ ನಡೆಯುತ್ತಿಲ್ಲ ಎಂಬ ದೂರುಗಳು ಬಂದಿವೆ. ಈ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಹೊರಗುತ್ತಿಗೆ ಆಧಾರದ ಮೇಲೆ 75 ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಆದಾಗ್ಯೂ, ನಗರದ ವ್ಯಾಪ್ತಿ ಹೆಚ್ಚಾಗಿರುವುದರಿಂದ ಪೌರಕಾರ್ಮಿಕರ ಅವಶ್ಯಕತೆ ಇದೆ. ಈ ವಿಷಯವನ್ನು ಸರ್ಕಾರದ ಗಮನಕ್ಕೆ ತರಲಾಗಿದ್ದು, ಅಧಿವೇಶನದಲ್ಲಿಯೂ ಹಾಸನ ನಗರಕ್ಕೆ ಹೆಚ್ಚುವರಿ ಪೌರಕಾರ್ಮಿಕರ ಕೊರತೆಯ ಬಗ್ಗೆ ಪ್ರಸ್ತಾಪಿಸಲಾಗಿದೆ ಎಂದು ಹೇಳಿದರು.

ನಗರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೀರುಗಂಟಿ, ಯುಜಿಡಿ ಸಿಬ್ಬಂದಿ ತಮ್ಮ ಸೇವೆಯನ್ನು ಖಾಯಂಗೊಳಿಸಬೇಕೆಂಬ ಬೇಡಿಕೆ ಮುಂದಿಟ್ಟಿದ್ದಾರೆ. ಅವರ ಕುಂದು ಕೊರತೆಗಳನ್ನು ಆಲಿಸಲಾಗಿದ್ದು, ಈ ಬೇಡಿಕೆಯನ್ನು ಸರ್ಕಾರದ ಹಾಗೂ ನಗರಾಭಿವೃದ್ಧಿ ಸಚಿವರ ಗಮನಕ್ಕೆ ತರುವ ಕುರಿತು ಚರ್ಚಿಸಲಾಗಿದೆ ಎಂದು ತಿಳಿಸಿದರು.

### ಪರಿಸರ ಸ್ನೇಹಿ ಗಣೇಶೋತ್ಸವ

ಗಣೇಶೋತ್ಸವ ಅಂಗವಾಗಿ ನಗರದಲ್ಲಿ ಪ್ರತಿಷ್ಠಾಪಿಸುವ ಗಣೇಶ ಮೂರ್ತಿಗಳ ವಿಸರ್ಜನೆಗೆ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದ್ದು, ಸಾರ್ವಜನಿಕರು ಕೆರೆ-ಕಟ್ಟೆ ಹಾಗು ಇತರ ಜಲಮೂಲಗಳಲ್ಲಿ ಮೂರ್ತಿಗಳನ್ನು ವಿಸರ್ಜಿಸಬಾರದು. ನಗರದ ಎಲ್ಲಾ 35 ವಾರ್ಡ್‌ಗಳಲ್ಲೂ ಗಣೇಶ ಮೂರ್ತಿ ವಿಸರ್ಜನೆಗಾಗಿ ನೀರಿನ ಟ್ಯಾಂಕರ್‌ಗಳ ಮೂಲಕ ಪ್ರತ್ಯೇಕ ವ್ಯವಸ್ಥೆ ಕಲ್ಪಿಸುವಂತೆ ಆಯುಕ್ತರಿಗೆ ಸೂಚನೆ ನೀಡಲಾಗಿದೆ. ಸಾರ್ವಜನಿಕರು ನಗರಾಡಳಿತ ಗುರುತಿಸಿರುವ ಸ್ಥಳಗಳಲ್ಲಿಯೇ ಮೂರ್ತಿಗಳನ್ನು ವಿಸರ್ಜಿಸುವ ಮೂಲಕ ಪರಿಸರ ಹಾಗು ಜಲಮೂಲಗಳ ಸಂರಕ್ಷಣೆಗೆ ಸಹಕರಿಸಬೇಕೆಂದರು.

ಮನೆಗಳಲ್ಲಿ ಪ್ರತಿಷ್ಠಾಪಿಸುವ ಸಣ್ಣ ಗಣೇಶ ಮೂರ್ತಿಗಳ ಜೊತೆಗೆ ಸಾರ್ವಜನಿಕವಾಗಿ ಪ್ರತಿಷ್ಠಾಪಿಸುವ ದೊಡ್ಡ ಗಣೇಶ ಮೂರ್ತಿಗಳ ವಿಸರ್ಜನೆಗೂ ಕ್ರಮ ಕೈಗೊಳ್ಳಲಾಗುತ್ತಿದೆ. ವಿಶೇಷವಾಗಿ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಸೇರಿ ಪರಿಸರಕ್ಕೆ ಹಾನಿಕಾರಕ ವಸ್ತುಗಳಿಂದ ತಯಾರಿಸಲಾದ ಮೂರ್ತಿಗಳ ವಿಸರ್ಜನೆಯಿಂದ ಕೆರೆ-ಕಟ್ಟೆ ಮತ್ತು ಜಲಮೂಲಗಳು ಕಲುಷಿತಗೊಳ್ಳುವ ಸಾಧ್ಯತೆ ಇರುವುದರಿಂದ, ಈ ಕುರಿತು ನಗರಾಡಳಿತ ಈಗಾಗಲೇ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

ಮಣ್ಣಿನಿಂದ ತಯಾರಿಸಲಾದ ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಬಳಕೆಗೆ ಉತ್ತೇಜನ ನೀಡಲಾಗುತ್ತಿದ್ದು, ಹೊರ ರಾಜ್ಯಗಳಿಂದ ತರಲಾಗುತ್ತಿರುವ ಕೆಲವು ಮೂರ್ತಿಗಳ ಗುಣಮಟ್ಟ ಹಾಗೂ ಅವುಗಳ ತಯಾರಿಕೆಯಲ್ಲಿ ಬಳಸಿರುವ ವಸ್ತುಗಳ ಬಗ್ಗೆಯೂ ಪರಿಶೀಲನೆ ನಡೆಸಲಾಗುತ್ತಿದೆ. ಪಿಒಪಿ ಮೂರ್ತಿಗಳ ಬಳಕೆ ಮತ್ತು ಮಾರಾಟದ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಈಗಾಗಲೇ ನಿಗಾವಹಿಸಿದ್ದು, ನಿಯಮ ಉಲ್ಲಂಘನೆಯಾದಲ್ಲಿ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಲಾಗಿದೆ.

ನಗರದಲ್ಲಿ ಗಣೇಶೋತ್ಸವದ ಹಿನ್ನೆಲೆಯಲ್ಲಿ ಸ್ವಚ್ಛತೆ, ಕುಡಿಯುವ ನೀರು ಹಾಗೂ ಗಣೇಶ ಮೂರ್ತಿ ವಿಸರ್ಜನೆಗೆ ವಿಶೇಷ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದರು.

## ದೇವೇಗೌಡರ ಹೋರಾಟದ ಫಲ

ಹಾಸನ: ರಾಷ್ಟ್ರೀಯ ಹೆದ್ದಾರಿ 373ರ ಬೇಲೂರು-ಹಾಸನ ಚತುಷ್ಪಥ ರಸ್ತೆ ಕಾಮಗಾರಿಗೆ 470 ಕೋಟಿ ರೂ. ದೊರೆತಿದ್ದು ದಶಕಗಳ ಕನಸು ನನಸಾಗುತ್ತಿದೆ. ರಾಜ್ಯಸಭೆ ಸದಸ್ಯರಾಗಿದ್ದ ಅವಧಿಯಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ನಡೆಸಿದ ಹೋರಾಟದ ಫಲ ಇದಾಗಿದೆ ಎಂದು ಶಾಸಕ ಹೆಚ್.ಪಿ. ಸ್ವರೂಪ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಕೇಂದ್ರ ಸರ್ಕಾರದೊಂದಿಗೆ ಅನೇಕ ಪತ್ರ ವ್ಯವಹಾರ, ಸಂಬಂಧಪಟ್ಟ ಸಚಿವರು ಹಾಗೂ ಅಧಿಕಾರಿಗಳನ್ನು ನಿರಂತವಾಗಿ ಭೇಟಿ ಮಾಡುವ ಮೂಲಕ ಕಾಮಗಾರಿಗೆ ಅನುದಾನ ಕೊಡಿಸಿದ್ದಾರೆ. ಯೋಜನೆಗೆ ಸಂಬಂಧಿಸಿದ ಪತ್ರ ವ್ಯವಹಾರಗಳು ಹಾಗು ಸರ್ಕಾರದ ದಾಖಲೆಗಳ ಮೂಲಕ ಸಂಪೂರ್ಣ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ ಎಂದರು.

ಪಂಚಾಯಿತಿ ಚುನಾವಣೆಗೆ ಸಂಬಂಧಿಸಿದ ಮೀಸಲಾತಿ ಪಟ್ಟಿಯಲ್ಲಿ ಬದಲಾವಣೆ ಮಾಡಿರುವ ಕ್ರಮದ ವಿರುದ್ಧ ಕಾನೂನು ಹೋರಾಟ ನಡೆಸಲು ಸಿದ್ಧತೆ ನಡೆಸಲಾಗಿದೆ ಎಂದು ಶಾಸಕರು ತಿಳಿಸಿದರು. ಹಾಸನ ಜಿಲ್ಲೆಯ ಪಂಚಾಯಿತಿ ಮೀಸಲಾತಿ ವಿಚಾರದಲ್ಲಿ ಈ ಹಿಂದೆ ಸಾಕಷ್ಟು ಹೋರಾಟ ನಡೆಸಲಾಗಿದೆ. ಈ ಸಂಬಂಧ ಹಲವು ಬಾರಿ ಚರ್ಚೆ ನಡೆಸುವುದರ ಜತೆಗೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸರ್ಕಾರಕ್ಕೆ ಪತ್ರಗಳ ಮೂಲಕ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

## ಬದುಕನ್ನು ಶ್ರೇಷ್ಠವಾಗಿಸಿಕೊಳ್ಳುವುದು ಮಾನವ ಧರ್ಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಮಾಡಾಳು: ಮಾನವನ ಬದುಕು ಎಷ್ಟು ಶ್ರೇಷ್ಠವಾಗಿರುತ್ತದೆಯೋ ಅಷ್ಟೇ ನಿಕೃಷ್ಟವೂ ಆಗಿದೆ. ಸನ್ಮಾರ್ಗದಲ್ಲಿ ಸಾಗುವ ಮೂಲಕ ಬದುಕನ್ನು ಶ್ರೇಷ್ಠವಾಗಿಸಿಕೊಳ್ಳುವುದು ಮಾನವ ಧರ್ಮ ಎಂದು ಸಾಣೇಹಳ್ಳಿ ಮಠದ ಶ್ರೀ ಪಂಡಿತಾರಾಧ್ಯ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಕಣಕಟ್ಟೆ ಹೋಬಳಿ ರಾಂಪುರ ಗ್ರಾಮದ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಉಪಾಧ್ಯಕ್ಷ ಆರ್. ಎನ್.ಶೇಖರಪ್ಪ ಅವರ ತಾಯಿ ರಾಮಕ್ಕ ಅವರ ಪುಣ್ಯಸ್ಮರಣೆ ಹಾಗೂ ಶರಣ ಸಮ್ಮೇಳನ ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಪ್ರತಿಯೊಬ್ಬ ವ್ಯಕ್ತಿಯು ಕನಿಷ್ಟ ಬದುಕನ್ನು ತೊರೆದು ಶ್ರೇಷ್ಟ ಬದುಕು



ರೂಪಿಸಿಕೊಳ್ಳಬೇಕು ಎನ್ನುವುದು ಬಸವಾದಿ ಶಿವಶರಣರ ಹಾಗೂ ಹಿರಿಯ ಗುರುಗಳ ಆಶಯವಾಗಿತ್ತು. ಹುಟ್ಟು ಮತ್ತು ಸಾವಿನ ಮಧ್ಯೆ ಈ ನಡುವಿನ ಅವಧಿಯಲ್ಲಿ ಲೋಕಕ್ಕೆ ಉತ್ತಮ ಕೊಡುಗೆಗಳನ್ನು ನೀಡುವುದು ಮಾನವ ಧರ್ಮ. ಭಕ್ತರು ಶ್ರೀಮಂತರಾದಾಗ ಅಹಂಕಾರ ಬೆಳೆಸಿಕೊಳ್ಳದೆ ಸತ್ಕಾರ್ಯಗಳನ್ನು ಮಾಡುವುದರ ಮೂಲಕ ತಮ್ಮ ಸಂಪತ್ತನ್ನು ಹೆಚ್ಚಿಸಿಕೊಳ್ಳಬೇಕು ಎಂದರು.

ಪಾಂಡುಮಟ್ಟಿ ವಿರಕ್ತ ಮಠದ ಶ್ರೀ ಗುರುಬಸವಾನಂದ ಸ್ವಾಮೀಜಿ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಯುವ ಜನತೆ ಆಧುನಿಕ ಜೀವನ ಶೈಲಿಗೆ ಮಾರು ಹೋಗಿ ಮೌಲ್ಯಗಳು ಮತ್ತು ಹಿರಿಯರ ಸಿದ್ಧಾಂತಗಳನ್ನು ಗಾಳಿಗೆ ತೂರಿ ನಡೆಯುತ್ತಿರುವುದರಿಂದ ಸಮಾಜ ದಿಕ್ಕು ತಪ್ಪುತ್ತಿದೆ ಎಂದರು.

ಮಾಡಾಳು ನಿರಂಜನ ಪೀಠದ ಶ್ರೀ ರುದ್ರಮುನಿ ಸ್ವಾಮೀಜಿ ಮಾತನಾಡಿ, ಮಕ್ಕಳಲ್ಲಿ ಮಾತನಾಡುವ ಕಲೆಗಿಂತ ಕೇಳಿಸಿಕೊಳ್ಳುವ ಗುಣ ಬೆಳೆಯಬೇಕು. ಅಂತರಂಗದ ಸತ್ಯ ಶುದ್ಧ ಪ್ರಾಮಾಣಿಕತೆ ಅಹಿಂಸೆ ಸಹಕಾರ ಮತ್ತು ಪರೋಪಕಾರದಂತಹ ಸದ್ಗುಣಗಳನ್ನ ಅಳವಡಿಸಿಕೊಂಡಾಗ ಮಾತ್ರ ಬದುಕು ಸಾರ್ಥಕತೆ ಹೊಂದುತ್ತದೆ ಎಂದು ಕಿವಿಮಾತು ಹೇಳಿದರು.

ಕೋಳಗುಂದ ಕೇದಿಗೆ ಮಠದ ಜಯಚಂದ್ರ ಶೇಖರ ಸ್ವಾಮೀಜಿ, ಡಿ.ಎಂ.ಕುರ್ಕೆ ಬೂದಿಹಾಳ್ ವಿರಕ್ತಮಠದ ಶಶಿಶೇಖರ ಸಿದ್ದಬಸವ ಸ್ವಾಮೀಜಿ, ಉಪನ್ಯಾಸಕ ದಿಬ್ಬದಹಳ್ಳಿ ಶ್ಯಾಮಸುಂದರ್ ಮಾತನಾಡಿದರು. ಸಾಧು ಲಿಂಗಾಯಿತ ಸಮಾಜದ ಮುಖಂಡ ಅಣ್ಣಾಯಕನಹಳ್ಳಿ ವಿಜಯಕುಮಾರ್, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿರ್ದೇಶಕ ಹೊಸೂರ್ ಗಂಗಾಧರ್, ಎನ್.ಜಿ.ಮರಳುಸಿದ್ದ ಸ್ವಾಮಿ ಹಾಜರಿದ್ದರು.

## ಬಾಳ್ಳುಪೇಟೆ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ 50ರ ಸಂಭ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬಾಳ್ಳುಪೇಟೆ: ಬಾಳ್ಳುಪೇಟೆ ಹಾಲು ಉತ್ಪಾದಕರ ಸಹಕಾರ ಸಂಘದ ವಾರ್ಷಿಕ ಮಹಾಸಭೆಯು ಸಂಘದ ಅಧ್ಯಕ್ಷ ಬಿ.ಬಿ.ಲೋಕೇಶ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಹಾಸನ ಹಾಲು ಒಕ್ಕೂಟದ ನಿರ್ದೇಶಕ ನಿಂಗರಾಜ್ ಅವರು ಮಾತನಾಡಿ, ಹಾಲು ಉತ್ಪಾದಕರ ಸಂಘಗಳಿಗೆ ಹಾಸನ ಹಾಲು ಒಕ್ಕೂಟದಿಂದ ದೊರೆಯುವ ವಿವಿಧ ಸೌಲಭ್ಯಗಳನ್ನು ಬಾಳ್ಳುಪೇಟೆ ಹಾಲು ಉತ್ಪಾದಕರ ಸಂಘಕ್ಕೆ ಒದಗಿಸಿಕೊಡುವುದಾಗಿ ತಿಳಿಸಿದರು.

ಹಾಲು ಒಕ್ಕೂಟದ ವ್ಯವಸ್ಥಾಪಕಿ ಮೋಕ್ಷ ಮಾತನಾಡಿ, ಹಾಲು ಒಕ್ಕೂಟದ ಕಾರ್ಯನಿರ್ವಹಣಾ ವಿಧಾನ ಹಾಗೂ ಒಕ್ಕೂಟ ಮತ್ತು ಹಾಲು ಉತ್ಪಾದಕರ ಸಂಘಗಳು



ಗುಣಮಟ್ಟದ ಹಾಲು ಪೂರೈಕೆಗೆ ಕೈಗೊಳ್ಳುತ್ತಿರುವ ಕ್ರಮಗಳ ಕುರಿತು ಮಾಹಿತಿ ನೀಡಿದರು.

ರೈತರು ಹೈನುಗಾರಿಕೆಯ ಜೊತೆಗೆ ಗುಣಮಟ್ಟದ ಹಾಲು ಉತ್ಪಾದಿಸಿ ಪೂರೈಸಬೇಕು. ರೈತ ದೇಶದ ಬೆನ್ನೆಲುಬು, ಹೈನುಗಾರಿಕೆ ರೈತನ ಬೆನ್ನೆಲುಬು ಎಂದರು. ವಿಸ್ತರಣಾಧಿಕಾರಿ ಪುಟ್ಟರಾಜ್ ಅಣ್ಣಪ್ಪ ಮಾತನಾಡಿ, ಪಶು ಆಹಾರ ಹಾಗೂ ಹಾಲಿನ ಅನುದಾನ ಸೇರಿ ಹಾಲು ಉತ್ಪಾದಕರ ಸಂಘಕ್ಕೆ ದೊರೆಯುವ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಸಂಘದ ನಿರ್ದೇಶಕ ಶಶಿಧರ್ ಹೊಸಗದ್ದೆ ಮಾತನಾಡಿ, ಬಾಳ್ಳುಪೇಟೆ ಹಾಲು ಉತ್ಪಾದಕರ ಸಹಕಾರ ಸಂಘವು 1976ರಲ್ಲಿ ಸ್ಥಾಪನೆಯಾಗಿ 50 ವರ್ಷಗಳನ್ನು ಪೂರೈಸಿದ್ದು, ತಾಲೂಕಿನಲ್ಲಿ ಮಾದರಿ ಹಾಲು ಉತ್ಪಾದಕರ ಸಹಕಾರ ಸಂಘವಾಗಿ ಬೆಳೆದಿದೆ ಎಂದು ಹೇಳಿದರು. ಅಧ್ಯಕ್ಷ ಬಿ.ಬಿ. ಲೋಕೇಶ್ ಮಾತನಾಡಿ, ಹಾಲು ಉತ್ಪಾದಕರು ಹಾಗು ಆಡಳಿತ ಮಂಡಳಿಯ ಸಹಕಾರದಿಂದ ಸಂಘವು ಈ ಮಟ್ಟಕ್ಕೆ ಬೆಳೆಯಲು ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿಯೂ ಸಂಘದ ಅಭಿವೃದ್ಧಿಗೆ ಎಲ್ಲರೂ ಹೆಚ್ಚಿನ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಸಂಘದ ಕಾರ್ಯದರ್ಶಿ ಜಯಪ್ರಕಾಶ್ ಅವರು ವಾರ್ಷಿಕ ಆಡಿಟ್ ವರದಿಯನ್ನು ಮಂಡಿಸಿ ಸಭೆಯ ಅನುಮೋದನೆಯೊಂದಿಗೆ ಅಂಗೀಕರಿಸಲಾಯಿತು.

ಪಶು ವೈದ್ಯಾಧಿಕಾರಿ ನಿತ್ಯಾನಂದ ಅವರು ಸಲ್ಲಿಸಿದ ಸೇವೆಯನ್ನು ಗುರುತಿಸಿ ಸಭೆಯಲ್ಲಿ ಅವರನ್ನು ಸನ್ಮಾನಿಸಲಾಯಿತು. ಸಭೆಯಲ್ಲಿ ಸಂಘದ ನಿರ್ದೇಶಕರು, ಹಾಲು ಉತ್ಪಾದಕರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಜಿ.ಬಿ. ಶಶಿಧರ್ ಕಾಂಗ್ರೆಸ್ ನೂತನ ಜಿಲ್ಲಾಧ್ಯಕ್ಷ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಜಿಲ್ಲಾ ಕಾಂಗ್ರೆಸ್ ನೂತನ ಅಧ್ಯಕ್ಷರಾಗಿ ಜಿ.ಬಿ ಶಶಿಧರ್ ಅವರನ್ನು ಹೈಕಮಾಂಡ್ ಆಯ್ಕೆ ಮಾಡಿದೆ.

ಶಶಿಧರ್ ಅವರ ಕುಟುಂಬಕ್ಕೂ, ಕಾಂಗ್ರೆಸ್ ಪಕ್ಷಕ್ಕೂ ಅವಿನಾಭಾವ ಸಂಬಂಧಕ್ಕೆ ದಶಕಗಳ ಇತಿಹಾಸವಿದೆ. ದಿ.ಮಾಜಿ ಶಾಸಕ ಜಿ.ಎಸ್ ಬಸವರಾಜು ಅವರ ಹಿರಿಯ ಪುತ್ರರಾಗಿರುವ ಶಶಿಧರ್ ಸಹ ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿಯಾಗಿದ್ದಾರೆ.

ಹಿಂದೆ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಿ ಪರಾಜಿತಗೊಂಡಿದ್ದರು. ಸೋತರೂ ಹೆಚ್ಚಿನ ಮತ ಪಡೆದಿದ್ದರಿಂದ ತಾಲೂಕು ಮಾತ್ರವಲ್ಲ, ಜಿಲ್ಲಾ ಕಾಂಗ್ರೆಸ್‌ನಲ್ಲಿ ತಮ್ಮದೇ ಹಿಡಿತ ಹೊಂದಿದ್ದಾರೆ.

ಕೆಪಿಸಿಸಿ ಕಾರ್ಯದರ್ಶಿ ಸೇರಿದಂತೆ ಪಕ್ಷ ನೀಡಿದ ಹಲವು ಜವಾಬ್ದಾರಿಗಳನ್ನ ಯಶಸ್ವಿಯಾಗಿ ನಿಭಾಯಿಸುವ ಮೂಲಕ ವಿಶ್ವಾಸಗಳಿಸಿವ ಶಶಿಧರ್, ಅವರಿಗೆ ಈಗ ಜಿಲ್ಲೆಯಲ್ಲಿ ಪಕ್ಷ ಸಂಘಟನೆ ಜವಾಬ್ದಾರಿ ನೀಡಲಾಗಿದೆ.

ಜಿಲ್ಲಾಧ್ಯಕ್ಷರಾಗಿ ಶಶಿಧರ್ ಅವರ ಹೆಸರು ಪ್ರಕಟಗೊಳ್ಳುತ್ತಿದ್ದಂತೆ ಸ್ಥಳೀಯ ಶಾಸಕರು, ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್, ಮಾಜಿ ಸಚಿವ ಬಿ. ಶಿವರಾಂ ಸೇರಿದಂತೆ ಜಿಲ್ಲೆಯ ಹಿರಿಯ-ಕಿರಿಯ ಮುಖಂಡರು ಶುಭ ಕೋರಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಶಶಿಧರ್, ಪಕ್ಷದ ಚೌಕಟ್ಟಿನಲ್ಲಿ ನನ್ನ ಸೇವೆ ಗುರುತಿಸಿ ರಾಜ್ಯ ನಾಯಕರು, ಹೈಕಮಾಂಡ್ ಜಿಲ್ಲಾಧ್ಯಕ್ಷ ಸ್ಥಾನ ನೀಡಿದ್ದು, ಪಕ್ಷದ ಎಲ್ಲ ಹಿರಿಯ ನಾಯಕನನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯಕರ್ತರ ಒಡಗೂಡಿ ಪಕ್ಷ ಸಂಘಟನೆಗೆ ಶ್ರಮಿಸುವುದಾಗಿ ಭರವಸೆ ನೀಡಿದರು.

ಸ್ಥಳೀಯ ಸಂಸ್ಥೆ ಚುನಾವಣೆ ಸೇರಿದಂತೆ ತಾಪಂ ಹಾಗೂ ಜಿಪಂ ಚುನಾವಣೆ ಬಳಿಕ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಗಳು ನಡೆಯುವುದರಿಂದ ಜಿಲ್ಲೆಯಾದ್ಯಂತ ಪ್ರವಾಸ ಮಾಡಿ ಪಕ್ಷ ಸಂಘಟನೆಗೆ ಒತ್ತು ನೀಡುವುದರೊಂದಿಗೆ ಕಾಂಗ್ರೆಸ್ ಹೈಕಮಾಂಡ್ ನನ್ನ ಮೇಲೆ ಇಟ್ಟಿರುವ ನಂಬಿಕೆ ಉಳಿಸಿಕೊಳ್ಳುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

## ಬೆಂಬಲಕ್ಕೆ ಜಾಣಗೆರೆ ವೆಂಕಟರಾಮಯ್ಯ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕನ್ನಡ ಸಾಹಿತ್ಯ ಪರಿಷತ್‌ಗೆ ಶ್ರೀಸಾಮಾನ್ಯ ಅಧ್ಯಕ್ಷ ಆಗಬೇಕೆಂಬ ಬಯಕೆ ಕನ್ನಡ ಮನಸ್ಸುಗಳ ಒತ್ತಾಸೆಯಾಗಿದ್ದು ಎಲ್ಲಾ ಮತದಾರರು ತಮಗೆ ಬೆಂಬಲ ನೀಡಿ ನುಡಿ ಸೇವೆಗೆ ಅವಕಾಶ ಮಾಡಿಕೊಡಬೇಕು ಎಂದು ಸಾಹಿತಿ, ಪತ್ರಕರ್ತ ಜಾಣಗೆರೆ ವೆಂಕಟರಾಮಯ್ಯ ಮನವಿ ಮಾಡಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಹುತೇಕ ಸಾಹಿತಿಗಳು ತಮಗೆ ಬೆಂಬಲ ನೀಡಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ರಾಜಕೀಯ ಪಕ್ಷಗಳು, ಜಾತಿ ಪ್ರಬಲ ಪಾತ್ರ ವಹಿಸುವುದಿಲ್ಲವೆಂಬ ವಿಶ್ವಾಸವಿದೆ. ಈಗಾಗಲೇ ರಾಜ್ಯದ ದಕ್ಷಿಣ ಕರ್ನಾಟಕದ ಜಿಲ್ಲೆಗಳ ಪ್ರವಾಸ ಮಾಡಿದ್ದು, ಉತ್ತಮ ಬೆಂಬಲ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಅಧಿಕಾರವನ್ನು




ರಾಜಕೀಯೇತರವಾಗಿ ಸಾಹಿತಿಗಳು, ಚಿಂತಕರೇ ಹಿಡಿಯಬೇಕೆಂಬ ಸದುದ್ದೇಶದಿಂದ ಚಿಂತನ-ಮಂತನ ನಡೆಸಿ ನನ್ನನ್ನು ಅಧ್ಯಕ್ಷ ಸ್ಥಾನದ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಾರೆ. ಈ ನಿಟ್ಟಿನಲ್ಲಿ ತಮಗೆ ಬೆಂಬಲ ನೀಡುವಂತೆ ಕನ್ನಡ ಸಾಹಿತ್ಯ ಪರಿಷತ್ತನ್ನು ನಾಡಪರ ವಾದ ಬೃಹತ್ ಶಕ್ತಿ ಸಂಘಟನೆಯಾಗಿ ರೂಪಿಸುವ ಸಂಕಲ್ಪ ಹೊಂದಿದ್ದೇವೆ. ಹಿಂದೆ ಅಧಿಕಾರ ನಡೆಸಿದವರು ಕನ್ನಡ ಸಾಹಿತ್ಯ ಪರಿಷತ್ತನ್ನು ಸರ್ವಾಧಿಕಾರ, ಭ್ರಷ್ಟಾಚಾರದಿಂದ ಹಾಳು ಮಾಡಿದ್ದಾರೆ.

ಯಾವುದೇ ಪ್ರಶಸ್ತಿ ನೀಡಲಿಲ್ಲ, ಸಾಹಿತಿಗಳಿಗೆ ಗೌರವ ಕೊಡಲಿಲ್ಲ, ಈ ವಾತಾವರಣವನ್ನು ಹೋಗಲಾಡಿಸಬೇಕು. ಸಾಮಾನ್ಯ ಕನ್ನಡಿಗರ ಹೆಮ್ಮೆ ಪರಿಷತ್ ಆಗಬೇಕೆಂಬ ಉದ್ದೇಶದಿಂದ ನಮ್ಮ ಹೋರಾಟವನ್ನು ಪ್ರಾರಂಭ ಮಾಡಿದ್ದೇವೆ ಎಂದು ಹೇಳಿದರು.

ಸಾಹಿತಿ ಆರ್.ಜಿ.ನಾಗರಾಜ್ ಮಾತನಾಡಿ, 112 ವರ್ಷಗಳ ಇತಿಹಾಸ ಹೊಂದಿರುವ ಪರಿಷತ್ ಪ್ರಸ್ತುತ ಸರ್ವಾಧಿಕಾರಿಗಳ ಕಪಿಮುಷ್ಟಿಗೆ ಸಿಲುಕಿ ಸಾಹಿತ್ಯಿಕ ಚಟುವಟಿಕೆ ನಿಷ್ಕ್ರಿಯವಾಗಿವೆ. ಪರಿಷತ್ತಿಗೆ ಘನತೆಯನ್ನು ಮತ್ತೆ ಹೆಚ್ಚಿಸಲು ಪ್ರಾಮಾಣಿಕ, ಸಾಹಿತ್ಯ, ಪತ್ರಿಕೋದ್ಯಮ, ಹೋರಾಟ ಸೇರಿ ಹಲವು ಕ್ಷೇತ್ರಗಳಲ್ಲಿ ದುಡಿದಿರುವ ವೆಂಕಟರಾಮಯ್ಯ ಅವರನ್ನು ಸಮಾನ ಮನಸ್ಕರು ಸೇರಿ ಚುನಾವಣೆಗೆ ನಿಲ್ಲಿಸುತ್ತಿದ್ದು, ಎಲ್ಲರೂ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಕನ್ನಡಪರ ಹೋರಾಟಗಾರ ಸಿ.ಟಿ.ರಾಮೇಗೌಡ, ಜಯಪ್ರಕಾಶ್‌ಗೌಡ, ಚಲನಚಿತ್ರ ನಿರ್ದೇಶಕ ನಂಜುಂಡೇಗೌಡ ಅವರು ಮಾತನಾಡಿದರು.

ಕನ್ನಡಪರ ಹೋರಾಟಗಾರ ಬಾಳ್ಳುಗೋಪಾಲ್, ಧರ್ಮರಾಜ್ ಕಡಗ ಇದ್ದರು.

ಕನ್ನಡ ಪೋಸ್ಟ್
E-mail : kannadapostnews@gmail.com facebook.com / ಕನ್ನಡ post



# 27 ವಾರಕ್ಕೆ ಆಗುವಷ್ಟು ಮಾತ್ರ ಮೇವು ದಾಸ್ತಾನು

## ಕಿಟ್ ವಿತರಣೆಗೆ ಸಿದ್ಧತೆ | ಸಂಕಷ್ಟದಲ್ಲಿ ರೈತಾಪಿ ವರ್ಗ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟಿರುವ ಹಿನ್ನಲೆಯಲ್ಲಿ ಜಿಲ್ಲಾದ್ಯಂತ ತೀವ್ರ ಬರದ ಛಾಯೆ ಆವರಿಸಿದ್ದು, ಜಾನವಾರುಗಳ ಮೇವಿಗೆ ಕೊರತೆಯ ಆತಂಕ ಕಾಡುತ್ತಿದೆ.

ಹೈನುಗಾರಿಕೆಯಿಂದಲೇ ಆರ್ಥಿಕ ಸ್ವಾವಲಂಬನೆ ಸಾಧಿಸಿರುವ ರೈತಾಪಿ ಜನರಿಗೆ ಬರ ಸಿಡಿಲಾಘಾತ ನೀಡಿದೆ. ದನಕರುಗಳ ಮೇವು ಹಾಗೂ ಕುಡಿಯುವ ನೀರಿಗೆ ಸಮಸ್ಯೆಯಾಗಂತೆ ಸರ್ಕಾರ ಮುನ್ನೆಚ್ಚರಿಕೆ ಕ್ರಮ ವಹಿಸಿದ್ದು, ಒಟ್ಟು 25,420 ಮೇವಿನ ಕಿಟ್‌ಗಳನ್ನು ವಿತರಿಸಲು ಯೋಜನೆ ರೂಪಿಸಿದೆ. ಮುಂದಿನ ವಾರದಲ್ಲಿ ಮೇವಿನ ಕಿಟ್ ಜಿಲ್ಲೆಗೆ ಬರಲಿದ್ದು, ಪಶು ಚಿಕಿತ್ಸಾಲಯಗಳ ಮೂಲಕ ಅರ್ಹ ರೈತರಿಗೆ ವಿತರಿಸಲು ತಯಾರಿ ಮಾಡಿಕೊಳ್ಳಲಾಗಿದೆ. ಸದ್ಯದ ಪರಿಸ್ಥಿತಿ ಪ್ರಕಾರ ಮುಂದಿನ 27 ವಾರಗಳಿಗೆ ಆಗುವಷ್ಟು ಮಾತ್ರ ಮೇವು ದಾಸ್ತಾನಿದೆ. ಚನ್ನರಾಯಪಟ್ಟಣ ಮತ್ತು ಅರಸೀಕೆರೆ ತಾಲ್ಲೂಕಿನಲ್ಲಿ ಪರಿಸ್ಥಿತಿ ಬಿಗಡಾಯಿಸಿದ್ದು ರೈತರು ಚಿಂತಾಕ್ರಾಂತರಾಗಿದ್ದಾರೆ.

### ಸರ್ಕಾರಕ್ಕೆ ಮೇವು ಒದಗಿಸಲು ಒಡಂಬಡಿಕೆ

ರಾಜ್ಯದಲ್ಲಿ ಮಳೆಯ ಕೊರತೆಯಿಂದ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮುಂಜಾಗ್ರತಾ ಕ್ರಮವಾಗಿ ಅರ್ಹ ರೈತರಿಗೆ ಮೇವಿನ ಕಿಟ್ ವಿತರಿಸಲು ಎಸ್‌ಡಿಆರ್‌ಎಫ್ ನಿಧಿಯಿಂದ



25 ಕೋಟಿ ರೂ. ಬಿಡುಗಡೆಯಾಗಿದೆ. ಮೇವು ಕಿಟ್ ವಿತರಣೆಯ ಸಂಪೂರ್ಣ ಜವಾಬ್ದಾರಿಯನ್ನು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗೆ ವಹಿಸಿದ್ದು, ರೈತರೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ಸೂಚಿಸಲಾಗಿದೆ. ರೈತರು ಬೆಳೆದ ಮೇವನ್ನು ಸರ್ಕಾರಕ್ಕೆ ಒದಗಿಸುವ ವ್ಯವಸ್ಥೆ ರೂಪಿಸಬೇಕು. ಆ ಮೂಲಕ ತಮ್ಮದೇಯಾದ ಮೇವು ಉತ್ಪಾದನಾ ಸೌಲಭ್ಯವನ್ನು ಹೊಂದಿರದ ಹಾಗೂ ಮೇವಿಗಾಗಿ ತೊಂದರೆ ಅನುಭವಿಸುತ್ತಿರುವ ಅಗತ್ಯವಿರುವ ಜಾನುವಾರು ಮಾಲೀಕರಿಗೆ ಸರ್ಕಾರದ ವತಿಯಿಂದ ಮೇವು ವಿತರಿಸಲು ಕ್ರಮ ವಹಿಸಲಾಗಿದೆ.

### 196 ಹಳ್ಳಿಗಳಲ್ಲಿ ಗಂಭೀರ ಸಮಸ್ಯೆ

ಜಿಲ್ಲಾದ್ಯಂತ 5.21 ಲಕ್ಷ ಜಾನುವಾರುಗಳು ಇದ್ದು ಹೈನುಗಾರಿಕೆಯೇ ಜಿಲ್ಲೆಯ ಜನರಿಗೆ ಆರ್ಥಿಕ ಆಧಾರವಾಗಿದೆ. ನಿತ್ಯ 16 ಲಕ್ಷ ಲೀ. ಹಾಲು ಸಂಗ್ರಹ ಮೂಲಕ ಹಾಸನ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದೆ. ಈ ಬಾರಿ ಬರದಿಂದ ಆದಾಯಕ್ಕೆ ಕತ್ತರಿ ಬಿದ್ದಿದೆ. ಜಿಲ್ಲೆಯ 196 ಹಳ್ಳಿಗಳಲ್ಲಿ ಮುಂದಿನ ದಿನಗಳಲ್ಲಿ ಮೇವಿಗೆ ಕೊರತೆಯಾಗುವ ಸಾಧ್ಯತೆಯಿದೆ. ಆಲೂರಿನ 24, ಅರಕಲಗೂಡು 5, ಅರಸೀಕೆರೆ 71, ಬೇಲೂರು 0, ಚನ್ನರಾಯಪಟ್ಟಣ 46, ಹಾಸನ 43, ಹೊಳೆನರಸೀಪುರ 7 ಹಾಗು ಸಕಲೇಶಪುರದ 0 ಗ್ರಾಮಗಳಲ್ಲಿ ಮೇವಿಗೆ ಕೊರತೆಯಾಗಲಿದೆ ಎಂದು ಅಂದಾಜಿಸಲಾಗಿದೆ. ಪ್ರತಿದಿನ ಒಂದು ಹಸುವಿಗೆ 6 ಕೆ.ಜಿ. ಹುಲ್ಲಿನಂತೆ ಪಶುಪಾಲನಾ ಇಲಾಖೆ ಲೆಕ್ಕ ಹಾಕಿದ್ದು, ಮುಂಬರುವ ದಿನಗಳಲ್ಲಿ ಸಮಸ್ಯೆಯಾಗದಂತೆ ನಿಗಾ ವಹಿಸಲಾಗಿದೆ.

### ತಾಲ್ಲೂಕುವಾರು ಮೇವಿನ ಲಭ್ಯತೆ

ಬೇಲೂರು ತಾಲ್ಲೂಕಿನಲ್ಲಿ ಮೇವಿನ ಸಮೀಕ್ಷೆ ನಡೆಸಲಾಗಿದ್ದು ರೈತರು ತಮ್ಮ ಸ್ವಂತ ಜಮೀನುಗಳಲ್ಲಿ ಜೋಳ, ಹೈಬ್ರಿಡ್ ನೆಪೀಯರ್ ಮುಂತಾದ ಉತ್ತಮ ತಳಿಯ ಮೇವಿನ ಬೆಳೆಗಳ 4807 ಟನ್ ಮೇವನ್ನು ಹಾಗೂ ರಸಮೇವಾಗಿ ಪರಿವರ್ತಿಸಿರುವ ಮೆಕ್ಕೆಜೋಳದ 61,378 ಟನ್ ಮೇವು



ಜಿಲ್ಲೆಗೆ ನಿಗದಿಯಾದ ಮೆವು ಕಿಟ್ ವಿವರ

| ತಾಲ್ಲಾಕು | 5 ಕೆ.ಜಿ.ತೂಕದ ಕಿಟ್ |
| --- | --- |
| ಆಲೂರು | 1318 |
| ಅರಕಲಗೂಡು | 3560 |
| ಅರಸೀಕೆರೆ | 4534 |
| ಬೇಲೂರು | 2568 |
| ಚನ್ನರಾಯಪಟ್ಟಣ | 5028 |
| ಹಾಸನ | 4252 |
| ಹೊಳೆನರಸೀಪುರ | 3123 |
| ಸಕಲೇಶಪುರ | 1036 |

ಹಾಗೂ ಬಣವೆ ಹಾಗೂ ವಿವಿಧ ರೂಪದಲ್ಲಿ ಸಂಗ್ರಹಿಸಲಾದ 9735 ಟನ್ ಒಣ ಮೇವು ಸಂಗ್ರಹಿಸಲಾಗಿದೆ. ಹೊಳೆನರಸೀಪುರ ತಾಲ್ಲೂಕಿನಲ್ಲಿ 6914 ಟನ್ ಹಸಿರು ಮೇವು, 72424 ಟನ್ ಒಣ ಮೇವು ಲಭ್ಯವಿದೆ. ಹಾಸನ ತಾಲ್ಲೂಕಿನಲ್ಲಿ 59562 ಟನ್ ಹಸಿರು ಮೇವು ಹಾಗೂ 14515 ಟನ್ ಒಣಮೇವು ಇರುವುದಾಗಿ ಮಾಹಿತಿ ಲಭ್ಯವಾಗಿದೆ.

ಕುಡಿಯುವ ನೀರಿಗೂ ಹಾಹಾಕಾರ: ಗ್ರಾಮೀಣ ಭಾಗದಲ್ಲಿ ಜಾನುವಾರುಗಳ ಮೇವಿಗೆ ಮಾತ್ರವಲ್ಲದೆ ಕುಡಿಯುವ ನೀರಿಗೂ ಸಮಸ್ಯೆ ಎದುರಾಗಿದೆ. ಗ್ರಾಮ ಪಂಚಾಯಿತಿ ವತಿಯಿಂದ ತೊಟ್ಟಿಗಳಲ್ಲಿ ನೀರು ತುಂಬಿಸುವಂತೆ ಸರ್ಕಾರ ಸೂಚಿಸಿದೆ. ಆದರೆ ಬಹುತೇಕ ಕಡೆ ನೀರಿಲ್ಲದೆ ಸಮಸ್ಯೆಯಾಗುತ್ತಿದೆ. ಕೆರೆಕಟ್ಟೆಗಳಲ್ಲೂ ನೀರಿನ ಲಭ್ಯತೆ ಕಡಿಮೆ ಇರುವುದು ಸಾರ್ವಜನಿಕರನ್ನು ತೊಂದರೆಗೆ ಸಿಲುಕಿಸಿದೆ.

# ಕ್ರೀಡಾಕೂಟ: ಬಾಲಕಿಯರ ವಿಭಾಗಕ್ಕೆ ಸಮಗ್ರ ಪ್ರಶಸ್ತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಪಟ್ಟಣದ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿನಿಯರು 17 ವರ್ಷ ವಯೋಮಿತಿಯ ಕಸಬಾ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಸರ್ವಾಂಗೀಣ ಪ್ರದರ್ಶನ ನೀಡಿ ಬಾಲಕಿಯರ ವಿಭಾಗದ ಸಮಗ್ರ ಪ್ರಶಸ್ತಿ ತಮ್ಮದಾಗಿಸಿಕೊಂಡಿದ್ದಾರೆ.

ಕ್ರೀಡಾಪಟು ರೂಪ ಅತ್ಯುತ್ತಮ ವೈಯಕ್ತಿಕ ಪ್ರದರ್ಶನದೊಂದಿಗೆ ಬಾಲಕಿಯರ ವೀರಾಗ್ರಣಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಕ್ರೀಡಾಕೂಟದ ಅಥ್ಲೆಟಿಕ್ಸ್ ಹಾಗೂ ಕ್ರೀಡಾ ಸ್ಪರ್ಧೆಗಳಲ್ಲಿ ಪಾರಮ್ಯ ಮೆರೆದ ಕಾಲೇಜಿನ ಬಾಲಕಿಯರು, 3000 ಮೀಟರ್ ಓಟದಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಗಳಿಸಿದರೆ, 4400 ಮೀಟರ್ ರಿಲೇ, ಗುಂಡು ಎಸೆತ, ಉದ್ದ ಜಿಗಿತ, ತ್ರಿವಿಧ ಜಿಗಿತ ಹಾಗೂ 800 ಮೀಟರ್ ಓಟದ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದುಕೊಂಡರು. ಉಳಿದಂತೆ 3000 ಮೀಟರ್ ನಡಿಗೆ, ಜಾವೆಲಿನ್ ಎಸೆತ, 400 ಮೀಟರ್ ಓಟ, ವಾಲಿಬಾಲ್ ಮತ್ತು ಬಾಲ್ ಬ್ಯಾಡ್ಮಿಂಟನ್ ಸ್ಪರ್ಧೆಗಳಲ್ಲಿ ದ್ವಿತೀಯ ಸ್ಥಾನಕ್ಕೆ ತೃಪ್ತಿಪಟ್ಟರು. ತಟ್ಟೆ ಎಸೆತ, ಎತ್ತರ ಜಿಗಿತ ಹಾಗೂ ಹ್ಯಾಮರ್ ಎಸೆತ ಸ್ಪರ್ಧೆಗಳಲ್ಲಿ ತೃತೀಯ ಸ್ಥಾನ ಗಳಿಸಿದರು.

ವೈಯಕ್ತಿಕ ವಿಭಾಗದಲ್ಲಿ ಅಪ್ರತಿಮ ಸಾಮರ್ಥ್ಯ ತೋರಿದ ವಿದ್ಯಾರ್ಥಿನಿ ರೂಪ 3000 ಮೀಟರ್ ಓಟ, 800 ಮೀಟರ್ ಓಟ ಹಾಗೂ 4400 ಮೀಟರ್ ರಿಲೇ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಗಳಿಸಿದ್ದಲ್ಲದೆ, 3000 ಮೀಟರ್ ನಡಿಗೆಯಲ್ಲಿ ದ್ವಿತೀಯ ಸ್ಥಾನ ಪಡೆದು ಬಾಲಕಿಯರ ವೀರಾಗ್ರಣಿ ಗೌರವಕ್ಕೆ ಪಾತ್ರರಾದರು. ಕ್ರೀಡಾಕೂಟದಲ್ಲಿ ಗಮನಾರ್ಹ ಸಾಧನೆಗೈದು ಶಾಲೆಗೆ ಕೀರ್ತಿ ತಂದ ಸಮಗ್ರ ತಂಡವನ್ನು ಹಾಗೂ ವೀರಾಗ್ರಣಿ ಪ್ರಶಸ್ತಿ ವಿಜೇತೆ ರೂಪ ಅವರನ್ನು ಕಾಲೇಜಿನ ಉಪಪ್ರಾಂಶುಪಾಲರು ಮತ್ತು ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.

# 1.20 ಲಕ್ಷ ರೂ. ಬೆಲೆಯ ಕೊಬ್ಬರಿ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹಳೇ ಮನೆಯಲ್ಲಿಟ್ಟಿದ್ದ ಸುಮಾರು 1.20 ಲ.ರೂ. ಮೌಲ್ಯದ 9 ಕೊಬ್ಬರಿ ಚೀಲ ಕಳವು ಮಾಡಿರುವ ಘಟನೆ ತಾಲ್ಲೂಕಿನ ಕಗ್ಗೆರೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಶಿವೇಗೌಡ ಅವರು ಕೊಬ್ಬರಿ ತುಂಬಿದ ಚೀಲಗಳನ್ನು ತಮ್ಮ ಹಳೇ ಮನೆಯಲ್ಲಿಟ್ಟು ಬೀಗ ಹಾಕಿದ್ದರು. ಬೆಳಿಗ್ಗೆ ಎದ್ದು ನೋಡಿದಾಗ ನಾಪತ್ತೆಯಾಗಿವೆ. ಹಿಂಬಾಗದ ಬಾಗಿಲು ಚೀಲಕ ತೆಗೆದು ಒಳಗೆ ಪ್ರವೇಶಿಸಿರುವ ಕಳ್ಳರು ಕಳ್ಳತನ ಮಾಡಿದ್ದಾರೆ. ನುಗ್ಗೇಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಚಿನ್ನದ ಸರ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಚಲಿಸುತ್ತಿದ್ದ ಬಸ್‌ನಲ್ಲಿ ಮಹಿಳೆಯ ಗಮನಕ್ಕೆ ಬಾರದಂತೆ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 1.19 ಲ.ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ನಡೆದಿದೆ.

ಹಳೇಕೋಟೆ ಹೋಬಳಿ ಕೆ.ಕೆ.ಹೊಸೂರು ಗ್ರಾಮದ ಚನ್ನಿಗಯ್ಯ ಹಾಗೂ ಹೆಂಡತಿ ಮೀನಾಕ್ಷಿ ಪೇಟೆಬೀದಿಯ ಕುಮಾರ್ ಜುಯಲಸ್ ನಲ್ಲಿ ಚಿನ್ನದ ಸರ ಖರೀದಿಸಿ ಹೊರಟಿದ್ದರು. ಬಸ್ ಹತ್ತಿದ ಕೆಲವೇ ಹೊತ್ತಿನಲ್ಲಿ ವ್ಯಾನಿಟಿ ಬ್ಯಾಗ್ ನೋಡಿದಾಗ ಪರ್ಸ್ ಮತ್ತು ಚಿನ್ನದ ಸರ ನಾಪತ್ತೆಯಾಗಿರುವುದು ತಿಳಿದಿದೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಗಾಂಧಿ ಕನಸಿನ ರಾಮ ರಾಜ್ಯ ನಿರ್ಮಾಣವಾಗಲಿ: ಡಿ.ಆರ್. ಪಾಟೀಲ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಹಾತ್ಮ ಗಾಂಧೀಜಿಯವರ ಕನಸಿನ ರಾಮ ರಾಜ್ಯ ಹಾಗೂ ಉತ್ತಮ ಸಮಾಜ ಸೃಷ್ಟಿಯಾಗಬೇಕು ಎಂದು ಮಾಜಿ ಶಾಸಕ ಡಿ.ಆರ್ .ಪಾಟೀಲ್ ಹೇಳಿದರು.

ತಾಲ್ಲೂಕಿನ ದಿಡಗ ಗ್ರಾಮದ ಸುವರ್ಣ ಭವನದಲ್ಲಿ ಬೆಂಗಳೂರಿನ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ವತಿಯಿಂದ ಆಯೋಜಿಸಿರುವ ರಾಜ್ಯಮಟ್ಟದ ಗಾಂಧಿ ತತ್ವ ಪ್ರಣಿತ ಯುವಜನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿ ಪ್ರಜೆಗಳೇ ಪ್ರಭುಗಳು ಎಂದರು.

ಸದ್ಯದ ಪರಿಸ್ಥಿತಿಯಲ್ಲಿ ಸಮಾಜವು ಮೊದಲಿನಂತಿಲ್ಲ. ಸ್ವಾಸ್ಥ್ಯ ಹದಗಿಟ್ಟಿದೆ. ಉತ್ತಮ ಸಂಸ್ಕೃತಿ ನಿರ್ಮಾಣವಾಗಬೇಕು. ಬದುಕು ಹಾಗೂ ನಮ್ಮ ನಡೆ ಪರಿಣಾಮಕಾರಿಯಾಗಬೇಕು. ಪ್ರತಿಭಾನ್ವಿತರಿಗೆ ಸಹಕಾರ ನೀಡುವುದರ ಜೊತೆಗೆ ಯಾರು ಸಹ ಶಿಕ್ಷಣದಿಂದ ವಂಚಿತರಾಗಬಾರದು ಎಂದು ತಿಳಿಸಿದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಮಹಾತ್ಮ ಗಾಂಧೀಜಿಯವರು ದೈಹಿಕವಾಗಿ ನಮ್ಮೊಂದಿಗೆ ಇಲ್ಲವಾದರೂ ಅವರ ಆದರ್ಶ ಹಾಗೂ ತತ್ವಸಂದೇಶಗಳು ಇಂದಿಗೂ ಜೀವಂತವಾಗಿವೆ. ಅವರ ಹೋರಾಟದ ಫಲವಾಗಿ ಇಂದು ನಾವು ಸ್ವತಂತ್ರರಾಗಿ ಬದುಕು ಕಟ್ಟಿಕೊಂಡಿದ್ದೇನೆ. ಈ ಭೂಮಿ ಹಾಗೂ ಪ್ರಪಂಚ ಇರುವವರೆಗೂ ಅವರ ಹೆಸರು ಶಾಶ್ವತವಾಗಿ ಉಳಿದಿರುತ್ತದೆ. ಮಹಾತ್ಮ ಗಾಂಧೀಜಿಯವರ



ಚಿಂತನೆ ಹಾಗೂ ಸ್ವಾತಂತ್ರ ಹೋರಾಟ ಎಂದಿಗೂ ಮರೆಯುವಂತಿಲ್ಲ ಎಂದು ಬಣ್ಣಿಸಿದರು.

ಯಾವುದೇ ವ್ಯಕ್ತಿಯು ಯಶಸ್ಸಿನ ಮೆಟ್ಟಲು ಹತ್ತುವಾಗ ಹಿಂದಿರುಗಿ ನೋಡಬಾರದು. ಯಶಸ್ಸು ಕಂಡ ನಂತರ ತಾನು ನಡೆದು ಬಂದ ದಾರಿಯನ್ನು ಹಿಂದಿರುಗಿ ನೋಡುವುದನ್ನು ಮರೆಯಬಾರದು. ಒಳ್ಳೆಯ ಸ್ನೇಹಿತರು ಸಿಗಲಿಲ್ಲವಾದಲ್ಲಿ ಪುಸ್ತಕಗಳನ್ನೇ ಸ್ನೇಹಿತರನ್ನಾಗಿ ಮಾಡಿಕೊಳ್ಳಿ. ವಿಚಾರಧಾರೆಗಳಿಂದ ನೀವು ಸಮಾಜದಲ್ಲಿ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಸಹಕಾರಿಯಾಗಲಿದೆ ಎಂದು ಶಿಬಿರಾರ್ಥಿಗಳಿಗೆ ಸಲಹೆ ನೀಡಿದರು.

ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ ನಾಡೋಜ ಡಾ. ವೂಡೇ ಪಿ. ಕೃಷ್ಣ ಮಾತನಾಡಿ, ಮಹಾತ್ಮ ಗಾಂಧೀಜಿಯವರ ದೇಹವನ್ನು ಸುಲಭವಾಗಿ ಕೊಂದಿರಬಹುದು. ಆದರೆ ಅವರ ಆದರ್ಶಗಳು, ತತ್ವ ಸಂದೇಶಗಳು ಹಾಗೂ ವಿಚಾರಧಾರೆಗಳನ್ನು ಯಾರಿಂದಲೂ, ಎಂದಿಗೂ ಸಹ ಕೊಲ್ಲಲು ಸಾಧ್ಯವಿಲ್ಲ ಎಂದರು.

ಪ್ರಪಂಚದಲ್ಲಿ ಮಾನವೀಯತೆಯ ಮೌಲ್ಯ ಇರುವವರೆಗೂ ಹಾಗೂ ಗಾಂಧಿ ವಾದಿಗಳು ಬದುಕಿರುವವರೆಗೂ ಮಹಾತ್ಮ ಗಾಂಧೀಜಿಯವರ ಹೆಸರು ಹಾಗೂ ವಿಚಾರಧಾರೆಗಳು ಉಳಿಯಲಿವೆ. ಸಾಮಾಜಿಕ ಜಾಲತಾಣಗಳಲ್ಲಿ ಮಹಾತ್ಮರ ಬಗ್ಗೆ ಅವಹೇಳನಾಕಾರಿ ಹಾಗೂ ಇಲ್ಲಸಲ್ಲದ ಮಾತುಗಳನಾಡುವ ಕೆಲ ಮಂದಿ ಇದ್ದಾರೆ. ಈ ಬಗ್ಗೆ ಕಾನೂನು ಕ್ರಮ ಕೈಗೊಳ್ಳುವಲ್ಲಿ ಸರ್ಕಾರ ಮುಂದಾಗಬೇಕು ಎಂದು ಮನವಿ ಮಾಡಿದರು.

ಗಾಂಧಿ ಭವನದ ಸಲಹೆಗಾರ ಪ್ರೊ. ಜಿ.ಬಿ.ಶಿವರಾಜು ಅವರು, ಗಣ್ಯರು ಹಾಗೂ ಶಿಬಿರಾರ್ಥಿಗಳನ್ನು ಸ್ವಾಗತಿಸಿ ಅಭಿನಂದಿಸಿದರು. ಶಿಬಿರಾರ್ಥಿಗಳು ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು. 6 ಜಿಲ್ಲೆಯ ಸುಮಾರು 160ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಬಿರದಲ್ಲಿ ಭಾಗವಹಿಸಿರುವುದು ವಿಶೇಷದ ಸಂಗತಿಯಾಗಿದೆ.

ಮಾಜಿ ಶಾಸಕ ಸಿ.ಎಸ್.ಪುಟ್ಟೇಗೌಡ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಕೆ.ಚಂದ್ರು, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಪುಟ್ಟರಾಜು, ಎಂ.ಆರ್.ವಾಸು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹರೀಶ್, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಸತೀಶ್, ಇಸಿಓ ಅನಿಲ್ ಕುಮಾರ್, ದಿಡಗ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಿ.ಆರ್. ಮಂಜುನಾಥ್, ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ನೀಲಿಸಿದ್ದು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೆ.ಎಸ್.ಪ್ರಕಾಶ್, ಮಾಜಿ ಸದಸ್ಯರಾದ ಜ್ಯೋತಿಶ್, ಸೌಮ್ಯ ಗವಿಶ್, ಪ್ರಮುಖರಾದ ಯೋಗೇಶ್, ದಿನೇಶ್, ಉಮೇಶ್ ಬಳಗಾರ ಹಾಗೂ ಶಿಬಿರಾರ್ಥಿಗಳು ಹಾಜರಿದ್ದರು.

# ದೋರನಹಳ್ಳಿಯಲ್ಲಿ ರೈತ ಆತ್ಮಹತ್ಯೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಾಲಬಾಧೆ ತಾಳಲಾರದೆ ರೈತ ಕಳೆನಾಶಕ ಔಷಧ ಸೇವಿಸಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ತಾಲ್ಲೂಕಿನ ದೋರನಹಳ್ಳಿಯಲ್ಲಿ ನಡೆದಿದೆ.

ಜಗದೀಶ್ (45) ಮೃತರು. ಶುಂಠಿ, ಆಲೂಗಡ್ಡೆ, ಮೆಕ್ಕೆಜೋಳ ಬೆಳೆ ಕೈಗೊಂಡಿದ್ದರು. ಕೃಷಿ ಚಟುವಟಿಕೆಗಾಗಿ ಕಾವೇರಿ ಗ್ರಾಮೀಣ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ, ವಿವಿಧ ಸಂಘ-ಸಂಸ್ಥೆಗಳು ಹಾಗೂ ಕೈ ಸಾಲದ ಮೂಲಕ 10



ಲ.ರೂ. ಸಾಲ ಮಾಡಿಕೊಂಡಿದ್ದರು ಎನ್ನಲಾಗಿದೆ.

ಸಾಲ ಮರುಪಾವತಿಸುವಂತೆ ಕಾವೇರಿ ಗ್ರಾಮೀಣ ಬ್ಯಾಂಕ್‌ನಿಂದ ನೋಟಿಸ್ ಜಾರಿಯಾದ್ದರಿಂದ ಪತ್ನಿಯ ಕೆಲ ಚಿನ್ನಾಭರಣಗಳನ್ನು ಅಡವಿಟ್ಟು ಸಾಲದ ಒಂದು ಕಂತು ಕಟ್ಟಿದ್ದರು.

ಆದರೆ ಮಳೆ ಕೊರತೆಯಿಂದ ಬೆಳೆಗಳು ಒಣಗಲಾರಂಭಿಸಿದ್ದರಿಂದ ಕೃಷಿ ವೆಚ್ಚ ಮತ್ತು ಸಾಲದ ಹೊರೆ ಮತ್ತಷ್ಟು ಹೆಚ್ಚಾಯಿತು. ಅದರಿಂದ ಮನನೊಂದ ಅವರು ಬುಧವಾರ ಜಮೀನಿನಲ್ಲೇ ಕಳೆನಾಶಕ ಸೇವಿಸಿ ಮೃತಪಟ್ಟಿದ್ದಾರೆ. ಗೊರೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಾರಣಾಂತಿಕ ಹಲ್ಲೆ: ಸುಳ್ಳು ಹೇಳಿಕೆ ದಾಖಲು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಎಣ್ಣೆ ಕೊಡಿಸಲಿಲ್ಲವೆಂದು ವ್ಯಕ್ತಿಯೊಬ್ಬರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ವೈದ್ಯರ ಎದುರು ಬೇರೆಯದೇ ಕಾರಣ ನೀಡಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ನಗರದ ಗದ್ದೆಹಳ್ಳ (80 ಅಡಿ ರಸ್ತೆ)ದ ನಿವಾಸಿ ಫೈರೋಜ್ ಖಾನ್ ಎಂಬುವವರ ಮೇಲೆ ಅಂಬೇಡ್ಕರ್ ನಗರದ ಶೀರು ಎಂಬಾತ ಹಲ್ಲೆ ಮಾಡಿದ್ದಾನೆ. ಹಮಾಲಿ ಕೆಲಸ ಮಾಡಿಕೊಂಡಿರುವ ಫೈರೋಜ್ ಖಾನ್ ಸೆ. 2ರ ರಾತ್ರಿ 9 ಗಂಟೆಗೆ ಕೆಲಸ ಮುಗಿಸಿ ಮನೆಗೆ ವಾಪಾಸ್ಸಾಗುತ್ತಿದ್ದಾಗ ಉಷಾ ಬಾರ್ ಸಮೀಪ ಎದುರಾದ ಶೀರು ಎಣ್ಣೆ ಕೊಡಿಸು ಅಥವಾ ಹಣ ಕೊಡು ಎಂದು ಒತ್ತಾಯಿಸಿದ್ದಾನೆ. ಫೈರೋಜ್ ಖಾನ್ ಅದಕ್ಕೆ ಒಪ್ಪದ ಹಿನ್ನಲೆಯಲ್ಲಿ ಕೈಗಳಿಂದ ಬಲವಾಗಿ ಮುಷ್ಟಿ ಕಟ್ಟಿ ಬಲವಾಗಿ ಹೊಡೆದ ಪರಿಣಾಮ ಕಿವಿ ಮತ್ತು ಮೂಗಿನಲ್ಲಿ ರಕ್ತ ಸೋರಿ ಪ್ರಜ್ಞೆ ತಪ್ಪಿ ಬಿದ್ದಿದ್ದಾರೆ. ಪರಿಸ್ಥಿತಿ ಗಂಭೀರವಾಗುತ್ತಿದ್ದಂತೆ ಫೈರೋಜ್ ಅವರ ಮಗಳು ರುಕ್ಸಾನಳಿಗೆ ಕರೆ ಮಾಡಿ ಸ್ಥಳಕ್ಕೆ ಬರುವಂತೆ ತಿಳಿಸಿದ್ದಾನೆ.

ಯಾವುದೋ ವಾಹನದಲ್ಲಿ ರುಕ್ಸಾನ ತಮ್ಮ ತಂದೆಯನ್ನು ಮನೆಗೆ ಕರೆದುಕೊಂಡು ಬಂದರಾದರೂ ತೀವ್ರ ರಕ್ತ ಸೋರುತ್ತಿದ್ದ ಹಿನ್ನಲೆಯಲ್ಲಿ ಹಿಮ್ಸ್‌ಗೆ ದಾಖಲಿಸಿದ್ದಾರೆ. ಆಸ್ಪತ್ರೆಗೆ ಜೊತೆಗೆ ಬಂದಿದ್ದ ಶೀರು ದಾಖಲಾತಿಯಲ್ಲಿ ಬರೆಸುವಾಗ ಸೆಲ್ಫ್ ಫಾಲ್ ಎಂಬುದಾಗಿ ಸುಳ್ಳು ಹೇಳಿ ರುಕ್ಸಾನಾಳಿಂದ ಸಹಿ ಹಾಕಿಸಿದ್ದಾನೆ ಎನ್ನಲಾಗಿದೆ.

ಫೈರೋಜ್ ಖಾನ್‌ನನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಆಸ್ಪತ್ರೆಗೆ ದಾಖಲಿಸಲಾಗಿದೆ. ಈಗ ಚೇತರಿಸಿಕೊಂಡಿರುವ ಅವರು ಗಂಭೀರ ಗಾಯಕ್ಕೆ ಶೀರು ಹೊಡೆದಿರುವುದು ಕಾರಣ ಎಂದು ಹೇಳಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-11

1906: ದಕ್ಷಿಣ ಆಫ್ರಿಕಾದ ಜೋಹಾನ್ಸ್ ಬರ್ಗ್‌ನ ಎಂಪೈರ್ ಥಿಯೇಟರ್‌ನಲ್ಲಿ ಮಹಾತ್ಮ ಗಾಂಧೀಜಿ ನೇತೃತ್ವದಲ್ಲಿ ಭಾರತೀಯರ ಸಭೆ ನಡೆಯಿತು. ವರ್ಣಭೇದದ ನೋಂದಣಿ ಕಾನೂನನ್ನು ವಿರೋಧಿಸಿ ಅಹಿಂಸಾತ್ಮಕವಾಗಿ ಹೋರಾಡುವ ಸಂಕಲ್ಪ ಕೈಗೊಳ್ಳಲಾಯಿತು. ಇದೇ ಚಳವಳಿ ಮುಂದೆ ಸತ್ಯಾಗ್ರಹ ಎಂದು ಪ್ರಸಿದ್ಧವಾಯಿತು.

1730: ರಾಜಸ್ಥಾನದ ಖೇಜರ್ಲಿಯಲ್ಲಿ ಮರಗಳನ್ನು ರಕ್ಷಿಸಲು ಅಮೃತಾ ದೇವಿ ಬಿಷ್ಣೋಯಿ ಸೇರಿದಂತೆ ಅನೇಕರು ಪ್ರಾಣತ್ಯಾಗ ಮಾಡಿದರು. ಈ ಘಟನೆ ಪರಿಸರ ಸಂರಕ್ಷಣೆಯ ಇತಿಹಾಸದಲ್ಲಿ ಪ್ರಮುಖವಾಗಿ ಗುರುತಿಸಲ್ಪಟ್ಟಿದೆ.

1921: ತಮಿಳಿನ ಖ್ಯಾತ ಕವಿ, ಪತ್ರಕರ್ತ, ಸ್ವಾತಂತ್ರ್ಯ ಹೋರಾಟಗಾರ ಹಾಗೂ ಸಮಾಜ ಸುಧಾರಕ ಸುಬ್ರಹ್ಮಣ್ಯ ಭಾರತಿ ನಿಧನರಾದರು. ತಮಿಳುನಾಡಿನಲ್ಲಿ ಈ ದಿನವನ್ನು ಮಹಾಕವಿ ದಿನವಾಗಿ ಆಚರಿಸಲಾಗುತ್ತದೆ.

1895: ಗಾಂಧೀಜಿಯ ಅನುಯಾಯಿ ಹಾಗೂ ಭೂದಾನ ಚಳವಳಿಯ ಪ್ರಮುಖ ನಾಯಕ ಆಚಾರ್ಯ ವಿನೋಬಾ ಭಾವೆ ಮಹಾರಾಷ್ಟ್ರದ ಗಾಗೋಡಾದಲ್ಲಿ ಜನಿಸಿದರು.

1973: ಚಿಲಿಯ ಪ್ರಜಾಸತ್ತಾತ್ಮಕವಾಗಿ ಆಯ್ಕೆಯಾದ ಅಧ್ಯಕ್ಷ ಸಾಲ್ವಡಾರ್ ಅಯೆಂಡೆ ಅವರ ಸರ್ಕಾರವನ್ನು ಸೇನೆ ಉರುಳಿಸಿತು. ಈ ದಂಗೆ ಬಳಿಕ ಆಗಸ್ಟೊ ಪಿನೊಚೆಟ್ ನೇತೃತ್ವದ ಸೈನಿಕ ಆಡಳಿತ ಸ್ಥಾಪನೆಯಾಯಿತು.

2001: ಅಮೆರಿಕದ ವಿಶ್ವವಾಣಿಜ್ಯ ಕೇಂದ್ರದ ಅವಳಿ ಗೋಪುರಗಳು ಸೇರಿದಂತೆ ಪ್ರಮುಖ ಸ್ಥಳಗಳ ಮೇಲೆ ಭಯೋತ್ಪಾದಕ ದಾಳಿ ನಡೆಯಿತು. ಈ ಘಟನೆ ಜಾಗತಿಕ ರಾಜಕೀಯ ಮತ್ತು ಭದ್ರತಾ ವ್ಯವಸ್ಥೆಯಲ್ಲಿ ದೊಡ್ಡ ಬದಲಾವಣೆಗೆ ಕಾರಣವಾಯಿತು.

# ಸೆ. 17ರಂದು ಕನ್ನಡ ಸಾಹಿತ್ಯದಲ್ಲಿ ಕಾಡು: ವಿಚಾರ ಸಂಕಿರಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಎ.ವಿ.ಕಾಂತಮ್ಮ ಮಹಿಳಾ ಕಾಲೇಜಿನಲ್ಲಿ ಸೆ. 17ರ ಗುರುವಾರ ಬೆಳಿಗ್ಗೆ 10 ಗಂಟೆಗೆ ಕನ್ನಡ ಸಾಹಿತ್ಯದಲ್ಲಿ ಕಾಡು ವಿಷಯ ಕುರಿತು ವಿಚಾರ ಸಂಕಿರಣ ಏರ್ಪಡಿಸಲಾಗಿದೆ.

ಸಾಹಿತ್ಯ ಅಕಾಡೆಮಿ ಹಾಗೂ ಕಾಲೇಜಿನ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ಸಾಹಿತ್ಯ ಅಕಾಡೆಮಿಯ ಕನ್ನಡ ಸಲಹಾ ಮಂಡಳಿ ಸಂಚಾಲಕ ಬಸವರಾಜ ಕಲ್ಗುಡಿ ಉದ್ಘಾಟಿಸುವರು. ಸಾಹಿತ್ಯ ಅಕಾಡೆಮಿಯ ಪ್ರಾದೇಶಿಕ ಕಾರ್ಯದರ್ಶಿ ಷಣ್ಮುಖಾನಂದ ಸ್ವಾಗತ ನುಡಿ ಆಡಲಿದ್ದು, ಸಲಹಾ ಮಂಡಳಿ ಸದಸ್ಯ ವಿಜಯಕುಮಾರ ಕಟಗಿಹಳ್ಳಿ ಮಠ ಪ್ರಾಸ್ತಾವಿಕ ನುಡಿ ಆಡುವರು. ಎಂಟಿಇಎಸ್ ಅಧ್ಯಕ್ಷ ಬಿ.ಆರ್. ಗುರುದೇವ್ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಾಂಶುಪಾಲೆ ಎನ್.ಎಸ್. ಶಶಿಕಲಾ ವಂದನಾರ್ಪಣೆ ನೆರವೇರಿಸಲಿದ್ದಾರೆ.

ಬೆಳಗ್ಗೆ 11.30ರ ನಂತರ ಮೊದಲ ಗೋಷ್ಠಿ ಆರಂಭವಾಗಲಿದೆ. ಗುರುಪಾದ ಮರಿಗುದ್ದಿ ಅವರು ಕುವೆಂಪು ಅವರ ಸಾಹಿತ್ಯದಲ್ಲಿ ಕಾಡು ವಿಷಯದ ಕುರಿತು ಪ್ರಬಂಧ ಮಂಡಿಸಲಿದ್ದು, ಹಳೆಮನೆ ರಾಜಶೇಖರ ಅವರು ಶಿವರಾಮ ಕಾರಂತರ ಸಾಹಿತ್ಯದಲ್ಲಿ ಕಾಡು ಕುರಿತು ವಿಚಾರ ಮಂಡಿಸಲಿದ್ದಾರೆ. ಕುವೆಂಪು ಹಾಗೂ ಶಿವರಾಮ ಕಾರಂತ ಅವರ ಸಾಹಿತ್ಯದಲ್ಲಿ ಪ್ರಕೃತಿ, ಪರಿಸರ, ಗ್ರಾಮೀಣ ಬದುಕು ಮತ್ತು ಮನುಷ್ಯನ ಅಂತರಂಗದೊಂದಿಗೆ ಕಾಡು ಹೊಂದಿರುವ ಸಂಬಂಧವನ್ನು ವಿಶ್ಲೇಷಿಸುವ ಮೂಲಕ ಅವರ ಸಾಹಿತ್ಯದ ವಿಭಿನ್ನ ಆಯಾಮಗಳನ್ನು ಪರಿಚಯಿಸುವ ಪ್ರಯತ್ನವಾಗಿ ಗೋಷ್ಠಿ ನಡೆಯಲಿದೆ. ಮಧ್ಯಾಹ್ನ 2 ಗಂಟೆಗೆ 2ನೇ ಗೋಷ್ಠಿ ನಡೆಯಲಿದೆ. ಕನ್ನಡ ಸಾಹಿತ್ಯದಲ್ಲಿ ಕಾಡಿನ ಅನುಭವ ಹಾಗೂ ಪರಿಸರ ಪ್ರಜ್ಞೆಯನ್ನು ವಿಭಿನ್ನವಾಗಿ ಕಟ್ಟಿಕೊಟ್ಟ ಸಾಹಿತಿಗಳ ಕೃತಿಗಳ ಕುರಿತು ಚರ್ಚೆ ನಡೆಯಲಿದೆ. ಹೆಚ್. ಶಶಿಕಲಾ ಅವರು ತೇಜಸ್ವಿ ಮತ್ತು ಕೃಷ್ಣ ಆಲನಹಳ್ಳಿಯವರ ಸಾಹಿತ್ಯದಲ್ಲಿ ಕಾಡು ವಿಷಯದ ಕುರಿತು ಪ್ರಬಂಧ ಮಂಡಿಸಲಿದ್ದು, ಸೀ.ಚ. ಯತೀಶ್ವರ ಅವರು ಹಾಡ್ಲಹಳ್ಳಿ ನಾಗರಾಜು ಅವರ ಸಾಹಿತ್ಯದಲ್ಲಿ ಕಾಡು ವಿಷಯದ ಕುರಿತು ವಿಚಾರ ಮಂಡಿಸಲಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248